# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2020-21ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಯೋಜನೆ NMSA-RAD ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಮೊದಲನೇ ಕಂತಿನ ಅನುದಾನ ಬಿಡುಗಡೆ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: AGRI-AML-91/2020, ದಿನಾಂಕ: 02.06.2020 ಮತ್ತು ಸೇರ್ಪಡೆ ಆದೇಶ ದಿನಾಂಕ:16.06.2020.

2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 1-26/2018-RFS-III(pt) ದಿನಾಂಕ:10.07.2020

3. ಸರ್ಕಾರದ ಆದೇಶ ಸಮ ಸಂಖ್ಯೆಯ ದಿನಾಂಕ:16.07.2020.

4. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಉಕೃನಿ/ರನಿಪ್ರ/NMSA-RAD/ಅಬಿ/ 2020-21, ದಿನಾಂಕ: 30.07.2020.

*****

**ಪ್ರಸ್ತಾವನೆ:**

2020-21ನೇ ಸಾಲಿನ ಆಯವ್ಯಯ ಸಂಪುಟ-3 ರಲ್ಲಿ ಕೇಂದ್ರ ಪುರಸ್ಕೃತ ಯೋಜನೆ NMSA-RAD ಯೋಜನೆಗಾಗಿ ಲೆಕ್ಕ ಶೀರ್ಷಿಕೆ: 2401-00-108-1-16 ಅಡಿ ಒಟ್ಟು ರೂ.1667.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶ ಮತ್ತು ಸೇರ್ಪಡೆ ಆದೇಶದಲ್ಲಿ ಕೇಂದ್ರ ಪುರಸ್ಕೃತ ಯೋಜನೆ NMSA-RAD ಯೋಜನೆಯನ್ನು 2020-21ನೇ ಸಾಲಿಗೆ ಮುಂದುವರೆಸುತ್ತಾ, ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರದಲ್ಲಿ, 2020-21ನೇ ಸಾಲಿನ ಕೇಂದ್ರ ಪುರಸ್ಕೃತ ಯೋಜನೆ NMSA-RAD ಯೋಜನೆಯಲ್ಲಿನ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಮೊದಲನೇ ಕಂತಿನ ಅನುದಾನ ಒಟ್ಟು ರೂ. 1500.00 ಲಕ್ಷಗಳ ಕೇಂದ್ರದ ಪಾಲಿನ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ.

ಮೇಲೆ ಓದಲಾದ (3)ರ ಸರ್ಕಾರದ ಆದೇಶದಲ್ಲಿ NMSA-RAD ಕಾರ್ಯಕ್ರಮದ 2019-20ನೇ ಸಾಲಿನ ಮರುಮೌಲ್ವೀಕರಿಸಿದ ಅನುದಾನ ಒಟ್ಟು ರೂ.639.21 ಲಕ್ಷಗಳನ್ನು ಬಿಡುಗಡೆ ಮಾಡಿ ಆದೇಶಿಸಲಾದ.

ಮೇಲೆ ಓದಲಾದ (4)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ 2020-21ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ- ಮಳೆಯಾಶ್ರಿತ ಪ್ರದೇಶಾಭಿವೃದ್ಧಿ ಯೋಜನೆ (NMSA-RAD)ಯ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಮೊದಲನೇ ಕಂತಿನ ಅನುದಾನ ಒಟ್ಟು ರೂ.558.33 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2401-00-108-01-16 ಅಡಿ ಕೆಳಕಂಡಂತೆ .ಬಿಡುಗಡೆ ಮಾಡುವಂತೆ ಕೋರಲಾಗಿದೆ.

....2

ರೂ. ಲಕ್ಷಗಳಲ್ಲಿ

| ವರ್ಗ / ಉಪ ಲೆಕ್ಕ ಶೀರ್ಷಿಕೆ | ಕೇಂದ್ರದ ಪಾಲಿನ ಅನುದಾನ (60%) | ರಾಜ್ಯದ ಪಾಲಿನ ಅನುದಾನ (40%) | ಒಟ್ಟು ಮೊತ್ತ |
|---|---|---|---|
| ಸಹಾಯಧನ (106) | 254.27 | 169.51 | 423.78 |
| ಪರಿಶಿಷ್ಟ ಜಾತಿ ಉಪಯೋಜನೆ (422) | 57.28 | 38.19 | 95.47 |
| ಗಿರಿಜನ ಉಪಯೋಜನೆ (423) | 23.45 | 15.63 | 39.08 |
| **ಒಟ್ಟು** | **335.00** | **223.33** | **558.33** |

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: AGRI-AMS/37/2020, ಬೆಂಗಳೂರು, ದಿನಾಂಕ:27.08.2020.**

2020-21ನೇ ಸಾಲಿನ ಕೇಂದ್ರ ಪುರಸ್ಕೃತ "ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ- ಮಳೆಯಾಶ್ರಿತ ಪ್ರದೇಶಭಿವೃದ್ಧಿ ಯೋಜನೆಯಡಿ (NMSA-RAD) ಲೆಕ್ಕ ಶೀರ್ಷಿಕೆ: 2401-00-108-1-16 ರಡಿ ಮೊದಲ ಕಂತಿನ ಅನುದಾನವಾಗಿ (ಕೇಂದ್ರ + ರಾಜ್ಯ ಪಾಲು ಸೇರಿ) ಒಟ್ಟು **ರೂ.190.79 ಲಕ್ಷಗಳ (ಒಂದು ನೂರು ತೊಂಬತ್ತು ಲಕ್ಷದ ಎಪ್ಪತ್ತೊಂಬತ್ತು ಸಾವಿರ ರೂಪಾಯಿಗಳು ಮಾತ್ರ)** ಅನುದಾನವನ್ನು ಈ ಕೆಳಕಂಡಂತೆ ವರ್ಗವಾರು ಬಿಡುಗಡೆ ಮಾಡುತ್ತಾ, ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಈ ಮೂಲಕ ಮಂಜೂರಾತಿ ನೀಡಿದೆ.

**ರೂ.ಲಕ್ಷಗಳಲ್ಲಿ**

| **ಘಟಕ** | **ಮೊದಲ ಕಂತು ಬಿಡುಗಡೆ ಮಾಡಲಾದ ಅನುದಾನ** |
|---|---|
| ಸಾಮಾನ್ಯ (106) | 174.07 |
| ವಿಶೇಷ ಘಟಕ ಯೋಜನೆ (422) | 10.27 |
| ಗಿರಿಜನ ಉಪ ಯೋಜನೆ (423) | 6.45 |
| ಒಟ್ಟು | **190.79** |

ಸದರಿ ಬಿಡುಗಡೆ ಮಾಡಲಾದ ಅನುದಾನವನ್ನು ಕೃಷಿ ಇಲಾಖೆಯು ಜಲಾನಯನ ಅಭಿವೃದ್ಧಿ ಇಲಾಖೆಯ CCO ಗೆ ನೀಡಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅನುಮೋದಿಸಿದೆ.

ಕೃಷಿ ನಿರ್ದೇಶಕರು/ ಜಲಾನಯನ ಅಭಿವೃದ್ಧಿ ಇಲಾಖೆಯ ನಿರ್ದೇಶಕರು ಕೇಂದ್ರ ಸರ್ಕಾರವು "Rainfed Area Development" ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಆಗ್ಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ/02/ಟಿಎಫ್ ಪಿ/2020, ದಿನಾಂಕ: 30.05.2020ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

27/08/202

**(ಶಕುಂತಲಾ ಚೌಗಲಾ)**
ಸರ್ಕಾರದ ಉಪ ಕಾರ್ಯದರ್ಶಿ-1
ಕೃಷಿ ಇಲಾಖೆ

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
7. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
8. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
9. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
10. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
14. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.